ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿಮೂರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 20ನೇ ಸೆಪ್ಟೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಬಸವರಾಜ ಬೊಮ್ಮಾಯಿ (ಮುಖ್ಯಮಂತ್ರಿಗಳು) ಅವರು:-

1) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ ಮಾರ್ಚ್ 2020ಕ್ಕೆ ಕೊನೆಗೊಂಡ ವರ್ಷಕ್ಕೆ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಪಾಲನಾ ಲೆಕ್ಕಪರಿಶೋಧನೆ (2022ನೇ ವರ್ಷದ ವರದಿ ಸಂಖ್ಯೆ:3) ವರದಿಯನ್ನು ಸಭೆಯ ಮುಂದಿಡುವುದು.

2) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ ಮಾರ್ಚ್ 2021ಕ್ಕೆ ಕೊನೆಗೊಂಡ ವರ್ಷಕ್ಕೆ ಸಮಗ್ರ ಹಣಕಾಸು ನಿರ್ವಹಣಾ ವ್ಯವಸ್ಥೆ ಖಜಾನೆ-II, ಕಾರ್ಯನಿರ್ವಹಣಾ ಪರಿಶೋಧನೆಯನ್ನು ಸಭೆಯ ಮುಂದಿಡುವುದು.

3) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ ಮಾರ್ಚ್ 2021ಕ್ಕೆ ಕೊನೆಗೊಂಡ ವರ್ಷಕ್ಕೆ ಕರ್ನಾಟಕದಲ್ಲಿ ನಗರ ಪ್ರದೇಶದ ಬಡವರಿಗೆ ವಸತಿ ಯೋಜನೆಗಳ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ (2022ನೇ ವರ್ಷದ ವರದಿ ಸಂಖ್ಯೆ:4) ವರದಿಯನ್ನು ಸಭೆಯ ಮುಂದಿಡುವುದು.

4) ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ (ಕರ್ತವ್ಯಗಳು, ಅಧಿಕಾರಗಳು ಮತ್ತು ಸೇವಾ ಷರತ್ತುಗಳ) ಅಧಿನಿಯಮ, 1971ರ ಪರಿಚ್ಛೇದ 19ಎರ ಮೇರೆಗೆ, ದೀನದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ (ಡಿಡಿಯುಜಿಜೆವೈ)/ ಪ್ರಧಾನ ಮಂತ್ರಿ ಸಹಜ್ ಬಿಜಲಿ ಹರ್ ಘರ್ ಯೋಜನೆಯ (ಸೌಭಾಗ್ಯ) ಅನುಷ್ಠಾನದ ಮೇಲಿನ ಸಾಧನಾ ಲೆಕ್ಕಪರಿಶೋಧನೆ (2022ನೇ ವರ್ಷದ ವರದಿ ಸಂಖ್ಯೆ:5) ವರದಿಯನ್ನು ಸಭೆಯ ಮುಂದಿಡುವುದು.

... 2/

3. ವರದಿಗಳನ್ನೊಪ್ಪಿಸುವುದು

1) **ಶ್ರೀ ಬಸನಗೌಡ ರಾಮನಗೌಡ ಪಾಟೀಲ (ಯತ್ನಾಳ)** (ಅಧ್ಯಕ್ಷರು, ಹಕ್ಕುಬಾಧ್ಯತೆಗಳ ಸಮಿತಿ) ಅವರು ಕರ್ನಾಟಕ ವಿಧಾನಸಭೆಯ ಹಕ್ಕುಬಾಧ್ಯತೆಗಳ ಸಮಿತಿಯ 2021–22ನೇ ಸಾಲಿನ ಮೊದಲನೇ ವರದಿಯನ್ನೊಪ್ಪಿಸುವುದು.

2) **ಶ್ರೀ ಜಿ.ಸೋಮಶೇಖರ ರೆಡ್ಡಿ** (ಅಧ್ಯಕ್ಷರು, ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಮೂವತ್ತಾರನೇ ವರದಿಯನ್ನೊಪ್ಪಿಸುವುದು.

4. ಶಾಸನ ರಚನೆ

ವಿಧೇಯಕಗಳನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

1. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

    ಅ) 2022ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

    ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

    ಅ) 2022ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

    ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3. **ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:–**

    ಅ) 2022ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

    ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. **ಶ್ರೀ ಆರ್. ಅಶೋಕ (ಮಾನ್ಯ ಕಂದಾಯ ಸಚಿವರು) ಅವರು:–**

    ಅ) 2022ನೇ ಸಾಲಿನ ಕರ್ನಾಟಕ ಭೂ ಕಬಳಿಕೆ ನಿಷೇಧ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

    ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. **ಶ್ರೀ ಎನ್. ನಾಗರಾಜ (ಎಂಟಿಬಿ) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು) ಅವರು:-**

ಅ) 2022ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. **ಡಾ. ನಾರಾಯಣಗೌಡ (ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು) ಅವರು:-**

ಅ) 2022ನೇ ಸಾಲಿನ ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಕೃಷ್ಣಬೈರೇಗೌಡ, ಎ.ಟಿ. ರಾಮಸ್ವಾಮಿ ಮತ್ತು ಈಶ್ವರ್ ಭೀಮಣ್ಣ ಖಂಡ್ರೆ ಇವರುಗಳು** – ಬೆಂಗಳೂರು ನಗರ ಜಿಲ್ಲೆಯ ಲಗ್ಗೆರೆ ಗ್ರಾಮದಲ್ಲಿ ನಗರ ಭೂ ಮಿತಿ (Urban Land Ceiling) ಕಾನೂನಿನ ಅಡಿ ಕಳೆದುಕೊಂಡ ಭೂಮಿಯ ವಿಸ್ತೀರ್ಣದ ಬಗ್ಗೆ ಸುಳ್ಳು ಮಾಹಿತಿಗಳನ್ನು ನೀಡಿ, ಭಾರಿ ಪ್ರಮಾಣದ ಲಾಭವನ್ನು ಮಾಡಿಕೊಂಡಿರುವವರ ಹಾಗೂ ಇದಕ್ಕೆ ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

2) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ಹೆಚ್.ಕೆ. ಪಾಟೀಲ, ಕೆ.ಆರ್. ರಮೇಶ್ ಕುಮಾರ್, ಡಾ. ಅಂಜಲಿ ಹೇಮಂತ್ ನಿಂಬಾಳ್ಕರ್ ಹಾಗೂ ಇತರರು** – ಪೊಲೀಸ್ ನೇಮಕಾತಿಯಲ್ಲಿನ ಅಕ್ರಮಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

3) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ವೆಂಕಟರಾವ್ ನಾಡಗೌಡ, ಡಿ.ಸಿ. ತಮ್ಮಣ್ಣ, ಎಂ. ಅಶ್ವಿನ್ ಕುಮಾರ್, ಎಲ್.ಎನ್. ನಿಸರ್ಗನಾರಾಯಣಸ್ವಾಮಿ, ಕೆ. ಮಹದೇವ ಹಾಗೂ ಇತರರು** – ಬಿ.ಎಂ.ಎಸ್. ಶಿಕ್ಷಣ ಸಂಸ್ಥೆಯ ಟ್ರಸ್ಟಿಗಳ ನೇಮಕ ಹಾಗೂ ಸಂಸ್ಥೆಯ ಅಧೀನದಲ್ಲಿರುವ ಕಾಲೇಜುಗಳ ವಿವಿಧ ಹುದ್ದೆಗಳ ನೇಮಕಾತಿ, ಪ್ರವೇಶ ಪ್ರಕ್ರಿಯೆ, ಶಿಕ್ಷಣ ಶುಲ್ಕ ವಸೂಲಾತಿ ಹಾಗೂ ಜಮೀನಿನಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

... 4/

4) **ಶ್ರೀಯುತರುಗಳಾದ ಪಿ.ಟಿ. ಪರಮೇಶ್ವರ ನಾಯಕ್, ಪ್ರಿಯಾಂಕ ಖರ್ಗೆ ಹಾಗೂ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಇವರುಗಳು** – ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಅನುದಾನವನ್ನು ವಿಶೇಷ ಅನುದಾನ ನೆಪದಲ್ಲಿ ಪ್ರಭಾವಿ ಸಂಸ್ಥೆಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

5) **ಶ್ರೀಯುತರುಗಳಾದ ಜೆ.ಎನ್. ಗಣೇಶ, ಪ್ರಿಯಾಂಕ ಖರ್ಗೆ, ಕೆ. ರಾಘವೇಂದ್ರ ಬಸವರಾಜ ಹಿಟ್ನಾಳ್, ಎಲ್.ಎನ್.ನಿಸರ್ಗನಾರಾಯಣಸ್ವಾಮಿ, ರಿಜ್ವಾನ್ ಅರ್ಷದ್, ಅನಿಲ್ ಚಿಕ್ಕಮಾದು ಹಾಗೂ ಇತರರು** – ಪರಿಶಿಷ್ಟ ಪಂಗಡ ಜಾತಿಗೆ 7.5 ಮೀಸಲಾತಿ ನೀಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

6. ಗಮನ ಸೆಳೆಯುವ ಸೂಚನೆಗಳು

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಯು.ಟಿ. ಅಬ್ದುಲ್ ಖಾದರ್, ಡಾ. ಅಜಯ ಧರ್ಮಸಿಂಗ್, ರಿಜ್ವಾನ್ ಅರ್ಷದ್ ಮತ್ತು ರಾಮಲಿಂಗಾರೆಡ್ಡಿ ಅವರುಗಳು** – ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯಲ್ಲಿ ಫಲವತ್ತಾದ ಭೂಮಿಯನ್ನು ಕೆ.ಐ.ಎ.ಡಿ.ಬಿ.ಯು ಭೂಸ್ವಾಧೀನ ಪ್ರಕ್ರಿಯೆ ನಡೆಸಿದ್ದು, ಇದರಿಂದ ರೈತರಿಗೆ ತೊಂದರೆಯಾಗುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

2) **ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ ಅವರು** – ಬೆಳಗಾವಿ ಜಿಲ್ಲೆ ಚನ್ನಮ್ಮನ ಕಿತ್ತೂರು ತಾಲ್ಲೂಕು ಕುಲವಳ್ಳಿ ಗ್ರಾಮ ಪಂಚಾಯಿತಿ ಮತ್ತು ಇತರೆ ಒಂಭತ್ತು ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ಇನಾಂ ಭೂಮಿಯಲ್ಲಿ 80, 90 ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ರೈತರಿಗೆ ಹಕ್ಕು ಪತ್ರ ವಿತರಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕೆ. ರಘುಪತಿ ಭಟ್ ಅವರು** – ಬಿಲ್ಲವ ಸಮುದಾಯದವರಿಗೆ ಶೂನ್ಯ ಬಡ್ಡಿದರದಲ್ಲಿ ಗುಂಪು ಸಾಲ ನೀಡುವ ಬಗ್ಗೆ ಹಾಗೂ ಈ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ಬ್ರಹ್ಮಶ್ರೀ ನಾರಾಯಣ ಗುರು ನಿಗಮ ಸ್ಥಾಪಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ಪಿ. ರಾಜೀವ್ ಅವರು** – ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕು ಬಂಗ್ಲಾದೊಡ್ಡಿ ಅರಣ್ಯ ಗಡಿಭಾಗ ವ್ಯಾಪ್ತಿಯ ಇಂಡ್ಲವಾಡಿಪುರ ಗ್ರಾಮದ ಜಮೀನುಗಳ ಮಾಲೀಕರನ್ನು ಒಕ್ಕಲೆಬ್ಬಿಸಲು ಅರಣ್ಯ ಇಲಾಖೆ ಸಿಬ್ಬಂದಿಯವರು ಕಿರುಕುಳ ನೀಡುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ಎ. ಮಂಜುನಾಥ್ ಅವರು** – ರಾಜ್ಯದಲ್ಲಿ ಎಲ್ಲಾ ಹಾಲು ಒಕ್ಕೂಟಗಳಿಂದ ಮಾರಾಟವಾಗುವ ಹಾಲಿನ ದರ ಮತ್ತು ಪಶು ಆಹಾರದ ದರವು ಕಾಲ ಕಾಲಕ್ಕೆ ಏರಿಕೆಯಾಗುತ್ತಿದ್ದರೂ ಸಹ ರೈತರಿಗೆ ನೀಡುವ ಹಾಲಿನ ದರದಲ್ಲಿ ಏರಿಕೆಯಾಗದೆ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

6) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ವಿವಿಧ ಭಾಗಗಳಲ್ಲಿ ಖಾಸಗಿ ಜಮೀನು ಮತ್ತು ವಸತಿ ಹೊಂದಿರುವ ಫಲಾನುಭವಿಗಳಿಗೆ ಅರಣ್ಯ ಇಲಾಖೆಯವರು ನೋಟಿಸ್ ನೀಡಿ, ಮೊಕದ್ದಮೆ ಹೂಡಿ, ಕಿರುಕುಳ ನೀಡುತ್ತಿರುವ ಬಗ್ಗೆ ಹಾಗೂ ಅವರ ಹಕ್ಕು ಉಲ್ಲಂಘನೆ ಆಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ಜೆ.ಎನ್. ಗಣೇಶ ಅವರು** – ಬಳ್ಳಾರಿ ಜಿಲ್ಲೆಯ ಕಂಪ್ಲಿ ಮತ್ತು ಕುರುಗೋಡು ಹೊಸ ತಾಲ್ಲೂಕುಗಳಿಗೆ ಬರುವಂತಹ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅನುದಾನವು ತಾಲ್ಲೂಕುವಾರು/ವಿಧಾನಸಭಾ ಕ್ಷೇತ್ರಕ್ಕೆ ಅನುಗುಣವಾಗಿ ಬಿಡುಗಡೆಯಾಗದೇ ಇರುವುದರಿಂದ ಅನುದಾನ ಹಂಚಿಕೆಯಲ್ಲಿ ಆಗುತ್ತಿರುವ ತಾರತಮ್ಯದ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

8) **ಶ್ರೀ ಬಳ್ಳಾರಿ ವಿರೂಪಾಕ್ಷಪ್ಪ ರುದ್ರಪ್ಪ ಅವರು** – ಹಾವೇರಿ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಲಿಂಪಿ ಸ್ಕಿನ್ ಡಿಸೀಸ್ ಕಂಡುಬಂದಿರುವ ಹಿನ್ನೆಲೆಯಲ್ಲಿ ತ್ವರಿತವಾಗಿ ಪಶು ವೈದ್ಯರನ್ನು ನೇಮಿಸುವ ಬಗ್ಗೆ ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

9) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲ್ಲೂಕು ಕಸಬಾ ಹೋಬಳಿ ಕೆಂಚನಹಳ್ಳಿ ಗ್ರಾಮದ ಜಮೀನನ್ನು ಮುಟ್ಟುಗೋಲು ಹಾಕಿರುವ ಪ್ರಕರಣಕ್ಕೆ ನ್ಯಾಯಾಲಯದಲ್ಲಿ ತಡೆಯಾಜ್ಞೆ ಇರುವುದಾಗಿ ತಪ್ಪು ಮಾಹಿತಿ ನೀಡಿರುವವರ ಬಗ್ಗೆ ಹಾಗೂ ಸದರಿ ಜಮೀನಿನ ಮುಟ್ಟುಗೋಲು ರದ್ದುಪಡಿಸಿ ಜಮೀನಿನ ಮಾಲೀಕರ ಹೆಸರನ್ನು ನಮೂದಿಸಿ ಕೊಡದ/ಯಾವುದೇ ಹಿಂಬರಹ ಮಾಹಿತಿ ನೀಡದೆ ಇರುವ ದೊಡ್ಡಬಳ್ಳಾಪುರದ ಉಪವಿಭಾಗಾಧಿಕಾರಿಗಳ ಬಗ್ಗೆ ಕ್ರಮ ಕೈಗೊಂಡು ಜಮೀನಿನ ಮಾಲೀಕರ ಹೆಸರಿಗೆ ಪಹಣಿ ನಮೂದಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10) **ಶ್ರೀ ರವೀಂದ್ರ ಶ್ರೀಕಂಠಯ್ಯ ಅವರು** – ಅರಣ್ಯ ಇಲಾಖೆಯ ಪುನರ್ ರಚಿತ ತಜ್ಞರ ಸಮಿತಿಯಿಂದ ಸಲ್ಲಿಸಲ್ಪಟ್ಟಿರುವ ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿ ಪರಿಭಾವಿತ ಅರಣ್ಯ ಎಂದು ಘೋಷಿಸಲಾಗಿರುವ ಪಟ್ಟಿಯಿಂದ ಕೈಬಿಟ್ಟಿರುವ ಜಾಗಗಳನ್ನು ಸಾರ್ವಜನಿಕ ಉದ್ದೇಶಗಳಿಗಾಗಿ ಬಳಸಿಕೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಎಸ್. ರಾಮಪ್ಪ ಅವರು – ಶಾಲಾ ಕಟ್ಟಡಗಳ ದುರಸ್ತಿ ಬಗ್ಗೆ ದಿನಾಂಕ: 14.09.2021ರಂದು ನಾಲ್ಕನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 58(500)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm